**Bangalore**
**Regional News**
**18.02.2026 / 6.40 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಸಾರಿಗೆ ಇಲಾಖೆ ನೌಕರರರ ಜೊತೆ ಮಾತುಕತೆ ನಡೆಸಿ ಸಮಸ್ಯೆಗೆ ಪರಿಹಾರ - ಸಚಿವ ರಾಮಲಿಂಗಾರೆಡ್ಡಿ ಸ್ಪಷ್ಟನೆ

೨. ಕಸ ವಿಲೇವಾರಿಗೆ ಅಡ್ಡಿಪಡಿಸಿದರೆ ಎಸ್ಮಾ ಕಾಯ್ದೆ ಪ್ರಯೋಗ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಚ್ಚರಿಕೆ

೩. ವಿಧಾನಸೌಧದೊಳಗೆ ಮಾಧ್ಯಮಗಳಿಗೆ ನಿರ್ಬಂಧ ವಿಧಿಸಿ ಸಿಬ್ಬಂದಿ, ಆಡಳಿತ ಸುಧಾರಣೆ ಇಲಾಖೆ ಆದೇಶ

೪. ಮಾಧ್ಯಮಗಳ ನಿರ್ಬಂಧ ಆದೇಶ ಹಿಂಪಡೆಯುವಂತೆ ಪ್ರತಿಪಕ್ಷ ಬಿಜೆಪಿ ಆಗ್ರಹ

೫. ರಣಜಿ ಟ್ರೋಫಿ ಸೆಮಿಫೈನಲ್ ಹಣಾಹಣಿ ; ಉತ್ತರಾಖಂಡ್ ವಿರುದ್ಧ ಕರ್ನಾಟಕಕ್ಕೆ ೮೦೨ ರನ್‌ಗಳ ಮುನ್ನಡೆ

****************

ಸಾರಿಗೆ ಇಲಾಖೆ ನೌಕರರು ನಾಳೆ ಮುಷ್ಕರ ನಡೆಸುವುದಿಲ್ಲ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

ಬಿಡದಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೌಕರರ ಜೊತೆ ಮಾತನಾಡುವಂತೆ ಇಲಾಖೆಯ ನಿರ್ದೇಶಕರಿಗೆ ತಿಳಿಸಲಾಗಿದೆ. ಅವರು ನೌಕರರ ಸಂಘಟನೆಗಳ ಜೊತೆ ಮಾತುಕತೆ ನಡೆಸಲಿದ್ದಾರೆ ಎಂದು ಹೇಳಿದ್ದಾರೆ. ನೌಕರರು ಸರ್ಕಾರದ ಗಮನ ಸೆಳೆಯಲು ಬೆಂಗಳೂರು ಚಲೋ ನಡೆಸಲು ನಿರ್ಧರಿಸಿದ್ದು, ಮಾತುಕತೆ ನಡೆಸಿ ಸಮಸ್ಯೆ ಬಗೆಹರಿಸುವುದಾಗಿ ಸಚಿವ ರಾಮಲಿಂಗಾರೆಡ್ಡಿ ಸ್ಪಷ್ಟಪಡಿಸಿದ್ದಾರೆ.

****************

ಬೆಂಗಳೂರಿನಲ್ಲಿ ಕಸದ ಸಮಸ್ಯೆ ಉಂಟಾಗುವ ಭೀತಿ ಎದುರಾಗಿದ್ದು, ಇಂದು ದೊಡ್ಡಬಳ್ಳಾಪುರ ಕಡಗೆ ತೆರಳುತ್ತಿದ್ದ ೩೦೦ಕ್ಕೂ ಹೆಚ್ಚು ಕಸದ ಲಾರಿಗಳನ್ನು ಸ್ಥಳೀಯರು ಹಾಗೂ ಬಿಜೆಪಿ ನಾಯಕರು ತಡೆದಿರುವ ಘಟನೆ ನಡೆದಿದೆ.

ಮಹದೇವಪುರ ವ್ಯಾಪ್ತಿಯ ಮಿಟ್ಟಗಾನಹಳ್ಳಿ, ಬೆಳ್ಳಹಳ್ಳಿ ತ್ಯಾಜ್ಯ ಸಂಸ್ಕರಣಾ ಘಟಕಕ್ಕೆ ತೆರಳುತ್ತಿದ್ದ ಲಾರಿಗಳಿಗೆ ಬಿಜೆಪಿ ಶಾಸಕ ಧೀರಜ್ ಮುನಿರಾಜು ನೇತೃತ್ವದಲ್ಲಿ ಅಲ್ಲಿನ ಸ್ಥಳೀಯರು ದಿಗ್ಬಂದನ ವಿಧಿಸಿದ್ದಾರೆ. ಸ್ಥಳೀಯ ಶಾಸಕಿ ಮಂಜುಳಾ ಅರವಿಂದ ಲಿಂಬಾವಳಿ ಸೂಚನೆ ಮೇರೆಗೆ ಗ್ರಾಮಸ್ಥರು ಕಸದ ಲಾರಿಗಳನ್ನು ತಡೆದಿದ್ದಾರೆ.

ಎರಡು ವರ್ಷಗಳಿಂದ ಗ್ರಾಮ ಪಂಚಾಯತಿಗೆ ಅನುದಾನ ನೀಡಲಿಲ್ಲ ಎಂದು ತ್ಯಾಜ್ಯ ಸುರಿಯುವುದಕ್ಕೆ ಸ್ಥಳೀಯರು ವಿರೋಧ ವ್ಯಕ್ತಪಡಿಸಿದ್ದಾರೆ.

****************

ಕಸ ವಿಲೇವಾರಿಗೆ ಅಡ್ಡಿ ಪಡಿಸುವವರ ವಿರುದ್ಧ ಎಸ್ಮಾ ಕಾಯ್ದೆಯಡಿ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅನುದಾನ ಕೊರತೆಗೆ ಹಿಂದಿನ ಬಿಜೆಪಿ ಸರ್ಕಾರವು ಕಾರಣ ಎಂದು ತಿಳಿಸಿದ್ದಾರೆ. ಕಸ ವಿಲೇವಾರಿಗೆ ಈಗಾಗಲೇ ಎರಡು ಹೊಸ ಜಾಗಗಳನ್ನು ಖರೀದಿ ಮಾಡಲಾಗಿದೆ. ಜೊತೆಗೆ ಕಾನೂನಿನ ಪ್ರಕಾರ ಟೆಂಡರ್ ಕರೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

****************

ವಿಧಾನಸೌಧದೊಳಗೆ ಮಾಧ್ಯಮಗಳಿಗೆ ನಿರ್ಬಂಧ ವಿಧಿಸಿ ಸರ್ಕಾರ ಆದೇಶ ಹೊರಡಿಸಿದೆ. ವಿಧಾನಸೌಧದ ಪಶ್ಚಿಮ ದ್ವಾರದ ಬಳಿ ಮಾತ್ರ ಪತ್ರಕರ್ತರು ಶಾಸಕರೊಂದಿಗೆ, ಸಚಿವರೊಂದಿಗೆ ಸಂದರ್ಶನ ನಡೆಸಬೇಕು ಎಂದು ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ನಿರ್ದೇಶನ ನೀಡಿದೆ.

ವರದಿಗಾರರು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸಚಿವರು ಹಾಗೂ ಇತರ ಗಣ್ಯರನ್ನು ಅಭಿಪ್ರಾಯಗಳಿಗಾಗಿ ಆವರಣದೊಳಗೆ ಹಿಂಬಾಲಿಸಬಾರದು ಎಂದು ಆದೇಶದಲ್ಲಿ ತಿಳಿಸಲಾಗಿದೆ. ಸರ್ಕಾರದ ಆದೇಶಕ್ಕೆ ಪ್ರತಿಪಕ್ಷಗಳು ಆಕ್ಷೇಪ ವ್ಯಕ್ತಪಡಿಸಿವೆ.

****************

ವಿಧಾನಸೌಧದಲ್ಲಿ ವರದಿಗಾರಿಕೆಗೆ ಕಡಿವಾಣ ಹಾಕುವ ಮೂಲಕ ರಾಜ್ಯ ಸರ್ಕಾರ ಪ್ರಜಾಪ್ರಭುತ್ವ ವಿರೋಧಿ ನಡೆ ಅನುಸರಿಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗಾವಿ ಅಧಿವೇಶನದಲ್ಲಿ ದ್ವೇಷ ಭಾಷಣ ಪ್ರತಿಬಂಧಕ ಕಾಯ್ದೆ ಅಂಗೀಕರಿಸಲಾಯಿತು. ಸರ್ಕಾರದ ಪ್ರತಿಯೊಂದು ನಿರ್ಧಾರವು ಪ್ರಜಾಪ್ರಭುತ್ವವನ್ನು ಅಣಕಿಸುವಂತಿದೆ ಎಂದು ದೂರಿದ್ದಾರೆ.

ರಾಜ್ಯ ಸರ್ಕಾರ ಕೂಡಲೇ ಈ ನಿರ್ಧಾರವನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದ್ದಾರೆ.

****************

ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯದಲ್ಲಿ ಬಡತನವನ್ನು ಬೇರು ಸಹಿತ ಕಿತ್ತೊಗೆಯುವ ಕ್ರಾಂತಿಕಾರಕ ಕಾರ್ಯವನ್ನು ರಾಜ್ಯ ಸರಕಾರ ಮಾಡಿದೆ ಎಂದು ಕಾನೂನು, ಸಂಸದೀಯ ವ್ಯವಹಾರ, ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ಗದಗ ಜಿಲ್ಲಾ ಪಂಚ ಗ್ಯಾರಂಟಿ ಕಾರ್ಯಾಗಾರ ಹಾಗೂ ಉತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪಂಚ ಗ್ಯಾರಂಟಿ ಯೋಜನೆ ಜಾರಿಯಿಂದಾಗಿ ಸಮಾಜವನ್ನು ಸುಧಾರಿಸಿ, ಕ್ರಾಂತಿಕಾರಕ ಬದಲಾವಣೆ ತರಲಾಗಿದೆ ಎಂದು ಹೇಳಿದ್ದಾರೆ.

ಇದೇ ಸಂದರ್ಭದಲ್ಲಿ ಪಂಚ ಗ್ಯಾರಂಟಿ ಯೋಜನೆಯ ಗದಗ ಜಿಲ್ಲೆಯ ಅಧ್ಯಯನ ವರದಿಯನ್ನು ಬಿಡುಗಡೆಗೊಳಿಸಲಾಯಿತು.

****************

ಹಳ್ಳಿಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ವಿದ್ಯಾಭ್ಯಾಸ ಪಡೆದರೆ ಜೀತ ಪದ್ಧತಿ ಕುಸಿಯಲಿದೆ ಎಂದು ಮಂಡ್ಯ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಜೆ.ಎನ್. ಸುಬ್ರಹ್ಮಣ್ಯ ತಿಳಿಸಿದ್ದಾರೆ.

ಜೀತ ಪದ್ಧತಿ ರದ್ದತಿ ಕಾಯ್ದೆ ೧೯೭೬ರ ಕುರಿತು ಆಯೋಜಿಸಲಾಗಿದ್ದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇಶದಲ್ಲಿ ಜೀತ ಪದ್ಧತಿ ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸರ್ಕಾರದ ಪ್ರತಿಯೊಂದು ಅಂಗಗಳು ಕ್ರಮ ಕೈಗೊಳ್ಳಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

ಜೀತ ಪದ್ಧತಿಗೆ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಪ್ರಚೋದನೆ ನೀಡುವವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಸೂಚಿಸಿದ್ದಾರೆ.

***************

ವಿಜಯನಗರ ಜಿಲ್ಲಾ ನಗರಾಭಿವೃದ್ಧಿ ಕೋಶವು ಉತ್ತಮ ಕಾರ್ಯ ನಿರ್ವಹಣೆ ಮಾಡಿದ್ದು ಶೇಕಡ ೯೦ರಷ್ಟು ಅನುದಾನ ಬಳಸಿಕೊಂಡಿದೆ ಎಂದು ಪೌರಾಡಳಿತ ಸಚಿವರಾದ ರಹೀಮ್ ಖಾನ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಹೊಸಪೇಟೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜರುಗಿದ ಕಲಬುರ್ಗಿ ವಿಭಾಗದ ವಿಜಯನಗರ, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳ ಪ್ರಗತಿ ಪರಿಶೀಲನಾ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಈಗಾಗಲೇ ಬೇಸಿಗೆ ಪ್ರಾರಂಭವಾಗಿರುವುದರಿಂದ ಎಲ್ಲಾ ಹಳ್ಳಿಗಳಲ್ಲೂ ಕುಡಿಯುವ ನೀರಿನ ಉತ್ತಮ ವ್ಯವಸ್ಥೆ ಇರುವಂತೆ ನೋಡಿಕೊಳ್ಳಿ ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

***************

ಗದಗ ಜಿಲ್ಲೆಯಲ್ಲಿ ಕಾನೂನು ಪದವಿ ಪಡೆದು ವೃತ್ತಿ ಜೀವನ ಪ್ರಾರಂಭಿಸಲು ಅನುಕೂಲವಾಗುವ ಉದ್ದೇಶದಿಂದ ಪ್ರತಿಯೊಬ್ಬ ವಕೀಲರಿಗೆ ಪ್ರತಿ ತಿಂಗಳು ೨ ಸಾವಿರ ರೂಪಾಯಿಯಂತೆ ೨೪ ತಿಂಗಳುಗಳ ಪ್ರೋತ್ಸಾಹಧನಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಗದಗ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ನಾಗವೇಣಿ ತಿಳಿಸಿದ್ದಾರೆ.

ಕಾನೂನು ಪದವಿ ಪೂರ್ಣಗೊಳಿಸಿ ಜಿಲ್ಲೆಯ ತಾಲೂಕು ಬಾರ್ ಕೌನ್ಸಿಲ್ ನಲ್ಲಿ ನೋಂದಣಿಯಾದವರು, ಜಿಲ್ಲಾ ಬಾರ್ ಕೌನ್ಸಿಲ್‌ನಲ್ಲಿ ನೋಂದಣಿಯಾದವರು ನೇರವಾಗಿ ಜಿಲ್ಲಾ ಕಾನೂನು ಪದವೀಧರರ ಪ್ರೋತ್ಸಾಹಧನ ಆಯ್ಕೆ ಸಮಿತಿಗೆ ಮಾರ್ಚ ೧೭ ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಕಛೇರಿಗೆ ಸಂಪರ್ಕಿಸಬೇಕೆಂದು ಪ್ರಕಟಣೆ ಮೂಲಕ ಹೇಳಿದ್ದಾರೆ.

***************

ಸಮಾಜದಲ್ಲಿ ಜೀತ ಪದ್ಧತಿಯಂತಹ ಅನಿಷ್ಠ ಪದ್ಧತಿ ಜೀವಂತವಾಗಿರುವುದು ದುರದೃಷ್ಟಕರ ಎಂದು ಕೋಲಾರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ಅಭಿಪ್ರಾಯಪಟ್ಟಿದ್ದಾರೆ.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಜೀತ ಕಾರ್ಮಿಕ ಪದ್ಧತಿ ನಿರ್ಮೂಲನಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಡತನ ಮತ್ತು ಆರ್ಥಿಕ ಸಂಕಷ್ಟಗಳಿಂದಾಗಿ ಜನರು ಸಣ್ಣಪುಟ್ಟ ಸಾಲ ಪಡೆದು ಜೀತ ಪದ್ಧತಿಗೆ ಸಿಲುಕುತ್ತಿದ್ದಾರೆ. ಇದು ಇಡೀ ತಲೆಮಾರನ್ನೇ ಶೋಷಣೆಯ ಸುಳಿಗೆ ತಳ್ಳಲಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.

ಇದಕ್ಕೂ ಮುನ್ನ ನಗರದ ಪ್ರವಾಸಿ ಮಂದಿರದಿಂದ ಮೆಕ್ಕೆ ವೃತ್ತದವರೆಗೆ ಜಾಥಾ  ಹಾಗೂ ಮಾನವ ಸರಪಳಿ ನಿರ್ಮಿಸಿ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

****************

ಮಂಗಳೂರಿನ ಕರಾವಳಿ ಉತ್ಸವ ಮೈದಾನದಲ್ಲಿ ಇದೇ ೨೦ರಿಂದ ೨೮ರ ವರೆಗೆ ರಾಷ್ಟ್ರ ಮಟ್ಟದ ಮಹಿಳಾ ಸ್ವ-ಸಹಾಯ ಗುಂಪುಗಳ ಉತ್ಪನ್ನಗಳ ಬೃಹತ್ ವಸ್ತುಪ್ರದರ್ಶನ ಹಾಗೂ ಮಾರಾಟ ಮೇಳ 'ನಮ್ಮ ಸರಸ್ ಮೇಳ-೨೦೨೪' ಆಯೋಜಿಸಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಧಿಕಾರಿ ನರ್ವಾಡೆ ವಿನಾಯಕ್ ಕಾರ್ಬಾರಿ ತಿಳಿಸಿದ್ದಾರೆ.

೧೫ ವಿವಿಧ ರಾಜ್ಯ ಹಾಗೂ ರಾಜ್ಯದ ಎಲ್ಲ ಜಿಲ್ಲೆಗಳಿಂದ ಸ್ವ-ಸಹಾಯ ಗುಂಪಿನ ಮಹಿಳೆಯರು ಪ್ರಮುಖ ಉತ್ಪನ್ನಗಳೊಂದಿಗೆ ಭಾಗವಹಿಸಲಿದ್ದಾರೆ. ಈ ಮೇಳಕ್ಕೆ ಸಾರ್ವಜನಿಕರಿಗೆ ಪ್ರವೇಶ ಸಂಪೂರ್ಣ ಉಚಿತವಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

****************

ಹುಬ್ಬಳ್ಳಿಯಲ್ಲಿ  ನಡೆಯುತ್ತಿರುವ ಮೇಲ್ಸೇತುವೆ ಕಾಮಗಾರಿಯನ್ನು ಮುಂದಿನ ೬ ತಿಂಗಳಲ್ಲಿ ಪೂರ್ಣಗೊಳಿಸಲು ಯೋಜನೆ ಹಮ್ಮಿಕೊಳ್ಳಲಾಗಿದೆ ಎಂದು  ಜಿಲ್ಲಾಧಿಕಾರಿ ಸ್ನೇಹಲ್ ಆರ್ ತಿಳಿಸಿದ್ದಾರೆ.

ಕಾಮಗಾರಿ ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೊಸುರು ವೃತ್ತ ಹಾಗೂ ಚೆನ್ನಮ್ಮ ವೃತ್ತದಲ್ಲಿ ಶೀಘ್ರಗತಿಯಲ್ಲಿ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಸಂಬಂಧಪಟ್ಟ ಅಧಿಕಾರಿಗಳು ತಿಳಿಸಿದ್ದಾರೆ. ಮುಂದಿನ ೬ ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸದೇ

ಇದ್ದಲ್ಲಿ ಗುತ್ತಿದಾರರನ್ನು ಕಪ್ಪು ಪಟ್ಟಿಗೆ ಸೇರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

****************

ಲಕ್ನೋದ ಏಕಾನ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಉತ್ತರಾಖಂಡ್ ವಿರುದ್ಧದ ರಣಜಿ ಸೆಮಿಫೈನಲ್ ಪಂದ್ಯದಲ್ಲಿ ಕರ್ನಾಟಕ ೮೦೧ ರನ್‌ಗಳ ಮುನ್ನಡೆ ಸಾಧಿಸಿದೆ. ನಾಲ್ಕನೇ ದಿನವಾದ ಇಂದು ಉತ್ತರಾಖಂಡ ಮೊದಲ ಇನ್ನಿಂಗ್ಸ್‌ನಲ್ಲಿ ಎಲ್ಲ ವಿಕೆಟ್ ಕಳೆದುಕೊಂಡು ೧೩೩ ರನ್ ಗಳಿಸಿತ್ತು.

೨ನೇ ಇನ್ನಿಂಗ್ಸ್‌ನಲ್ಲಿ ದಿನದಾಟದ ಅಂತ್ಯಕ್ಕೆ ಕರ್ನಾಟಕ ೬ ವಿಕೆಟ್ ನಷ್ಟಕ್ಕೆ ೨೯೯ ರನ್ ಗಳಿಸಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ಶತಕ ಬಾರಿಸಿದ್ದ ಸ್ಮರಣ್ ರವಿಚಂದ್ರನ್ ೨ನೇ ಇನ್ನಿಂಗ್ಸ್‌ನಲ್ಲೂ ಶತಕ ಬಾರಿಸಿ ತಂಡವನ್ನು ಬೃಹತ್ ಮೊತ್ತದತ್ತ ಕೊಂಡೊಯ್ದಿದ್ದಾರೆ.

********ಮುಕ್ತಾಯ********